## ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

### ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ದತ್ತಾಂಶ ನಮೂದು ಸಹಾಯಕ(ಬೆರಳಚ್ಚುಗಾರರು) ಗಳಿಗೆ ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ತಾಂತ್ರಿಕ ಶಿಕ್ಷಣ ಇಲಾಖೆಯ 2006 ರ ವೃಂದ ಮತ್ತು ನೇಮಕಾತಿ ನಿಯಮಗಳು.
2. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ/14/ಇಎಸ್‌ಟಿ(6)/2019, ದಿನಾಂಕ: 28.10.2019 ರ ಅನುಬಂಧ-2 ರಲ್ಲಿ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಬೆರಳಚ್ಚುಗಾರರ ಉಳಿದ ಮೂಲ ವೃಂದದ ಅಂತಿಮ ಜೇಷ್ಠತಾ ಪಟ್ಟಿ
3. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ಈ ಕಛೇರಿ ಜ್ಞಾಪನ ಸಂಖ್ಯೆ: DTE-ADMIOEST(4)/18/2021, ದಿನಾಂಕ: 27.12.2021

*****

ಪ್ರಸ್ತಾವನೆ:

ತಾಂತ್ರಿಕ ಶಿಕ್ಷಣ ಇಲಾಖೆಯ ದತ್ತಾಂಶ ನಮೂದು ಸಹಾಯಕ(ಬೆರಳಚ್ಚುಗಾರರು) ಗಳಿಗೆ ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡುವ ಬಗ್ಗೆ ಪರಿಶೀಲಿಸಲಾಯಿತು. ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ 2006 ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಒಟ್ಟು 12 ಹಿರಿಯ ಬೆರಳಚ್ಚುಗಾರರ ಹುದ್ದೆಗಳು ಮಂಜೂರಾಗಿದ್ದು, ಸದರಿ ಹುದ್ದೆಗಳನ್ನು ಗುರುತಿಸಲಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ, ಸದರಿ ಬೆರಳಚ್ಚುಗಾರರ ಹುದ್ದೆಗಳನ್ನು ಹಿರಿಯ ಬೆರಳಚ್ಚುಗಾರರ ಹುದ್ದೆಗೆ ಉನ್ನತೀಕರಿಸಿ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದೆ. ಅದರಂತೆ ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗಳಿಗೆ ದತ್ತಾಂಶ ನಮೂದು ಸಹಾಯಕರ ಹುದ್ದೆಯಿಂದ ಶೇಕಡ 100 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1) ರಂತೆ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಬೆರಳಚ್ಚುಗಾರರ ಉಳಿದ ಮೂಲ ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಹಿರಿಯ ದತ್ತಾಂಶ ನಮೂದು ಸಹಾಯಕರ ವೃಂದದಲ್ಲಿ ಖಾಲಿಯಿರುವ ಹುದ್ದೆಗಳನ್ನು ಸ್ಥಾನಪನ್ನ ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿಯಿರುವ ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ದತ್ತಾಂಶ ನಮೂದು ಸಹಾಯಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ದತ್ತಾಂಶ ನಮೂದು ಸಹಾಯಕ ವೃಂದದಿಂದ ಹಿರಿಯ ದತ್ತಾಂಶ ನಮೂದು ಸಹಾಯಕರ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಲು ಅರ್ಹರಿರುವ ದತ್ತಾಂಶ ನಮೂದು ಸಹಾಯಕರುಗಳಿಗೆ ಮೂರು ಸ್ಥಳ ಸೂಚಿಸಲು ಉಲ್ಲೇಖ (3) ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ದತ್ತಾಂಶ ನಮೂದು ಸಹಾಯಕರುಗಳಿಗೆ ಹಿರಿಯ ದತ್ತಾಂಶ ನಮೂದು ಸಹಾಯಕರಾಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: DTE-ADMIOEST(4)/18/2021, ದಿನಾಂಕ:31.12.2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಈ ಕೆಳಕಂಡ ದತ್ತಾಂಶ ನಮೂದು ಸಹಾಯಕರಿಗೆ ಗ್ರೂಪ್-ಸಿ ವೃಂದದ ರಾಜ್ಯ ವೇತನ ಶ್ರೇಣಿ ರೂ. 27650-650-29600-750-32600-850-36000-950-39800-1100-46400-1250-52650 ರಲ್ಲಿನ ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ಅವರ ಹೆಸರಿನ ಮುಂದೆ ಸೂಚಿಸಿರುವ ಉನ್ನತೀಕರಿಸಲಾದ ದತ್ತಾಂಶ ನಮೂದು ಸಹಾಯಕರ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಉಳಿದ ಮೂಲ ವೃಂದ

| ಕ್ರ ಸಂ | ದತ್ತಾಂಶ ನಮೂದು ಸಹಾಯಕರ ಹೆಸರು | ಕಾರ್ಯನಿರ್ವಹಿಸುತ್ತಿರುವ ಕಛೇರಿ / ಸಂಸ್ಥೆ | ಹಿರಿಯ ದತ್ತಾಂಶ ನಮೂದು ಸಹಾಯಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಕಛೇರಿ / ಸಂಸ್ಥೆ | ಷರಾ |
|---|---|---|---|---|
| 1. | ಎನ್.ಎಲ್. ನಾಗರಾಜು ದತ್ತಾಂಶ ನಮೂದು ಸಹಾಯಕರು | ವಿ.ಐ.ಎಸ್.ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಭದ್ರಾವತಿ | ವಿ.ಐ.ಎಸ್.ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಭದ್ರಾವತಿ | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 2. | ಇಂದಿರಾ ಎಂ.ಎಸ್. ದತ್ತಾಂಶ ನಮೂದು ಸಹಾಯಕರು | ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 3. | ಸುನಂದಮ್ಮ ಎಂ. ದತ್ತಾಂಶ ನಮೂದು ಸಹಾಯಕರು | ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 4. | ಕಾವೇರಿ ಖಾನಾಪೇಟ್ ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಕುಷ್ಟಗಿ | ಸರ್ಕಾರಿ ಪಾಲಿಟೆಕ್ನಿಕ್, ಕುಷ್ಟಗಿ | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 5. | ಮಂಜುನಾಥಸ್ವಾಮಿ ಎ.ವಿ. ದತ್ತಾಂಶ ನಮೂದು ಸಹಾಯಕರು | ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು | ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 6. | ಜಯಸಿಂಹ ಜಿ. ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಎಸ್.ಜೆ.(ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಎಸ್.ಜೆ. ಪಾಲಿಟೆಕ್ನಿಕ್, ಬೆಂಗಳೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 7. | ಮಹದೇವಮ್ಮ ಹೆಚ್.ಆರ್. ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಚಾಮರಾಜನಗರ | ಸರ್ಕಾರಿ ಪಾಲಿಟೆಕ್ನಿಕ್, ಚಾಮರಾಜನಗರ | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 8. | ಜಿ.ಎಸ್. ಜ್ಯೋತಿ ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ | ಸರ್ಕಾರಿ ಜಿ.ಆರ್.ಐ.ಸಿ.ಪಿ. ಬೆಂಗಳೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 9. | ಸವಿತಾ ಬೆಟಗೇರಿ ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಗಜೇಂದ್ರಗಡ | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |
| 10. | ರೇಖಾ ಡಿ.ಆರ್. ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಸಿ.ಪಿ.ಸಿ. ಪಾಲಿಟೆಕ್ನಿಕ್, ಮೈಸೂರು | ಸರ್ಕಾರಿ ಸಿ.ಪಿ.ಸಿ. ಪಾಲಿಟೆಕ್ನಿಕ್, ಮೈಸೂರು | ಖಾಲಿ – ಉನ್ನತೀಕರಿಸಿದ ಹುದ್ದೆಯ ಎದುರಾಗಿ |

ಮುಂಬಡ್ತಿ ಹೊಂದಿದ ಸಿಬ್ಬಂದಿಗಳು ಸ್ಥಾನಪನ್ನ ಮುಂಬಡ್ತಿ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 19(ಸಿ)ರ ಪ್ರಕಾರ ಒಂದು ವರ್ಷದ ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

ಬಡ್ತಿ ಹೊಂದಿರುವ ದತ್ತಾಂಶ ನಮೂದು ಸಹಾಯಕರು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಕಛೇರಿ / ಸಂಸ್ಥೆಯಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ

ಬಡ್ತಿ ಹೊಂದಿರುವ ದತ್ತಾಂಶ ನಮೂದು ಸಹಾಯಕರ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

1. ಸಂಬಂಧಪಟ್ಟ ಸರ್ಕಾರಿ ಇಂಜನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
2. ಸಂಬಂಧಪಟ್ಟ ದತ್ತಾಂಶ ನಮೂದು ಸಹಾಯಕರಿಗೆ(ಸಂಬಂಧಿಸಿದ ಪ್ರಾಂಶುಪಾಲರು / ಮೇಲಾಧಿಕಾರಿಗಳ ಮೂಲಕ);
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಶಾಖಾ ರಕ್ಷಾ ಕಡತ.